2) ಪರಿಶಿಷ್ಟ ವರ್ಗ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು-19

3) ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು-98

ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಒಟ್ಟು ವಿದ್ಯಾರ್ಥಿನಿಲಯಗಳ ಸಂಖ್ಯೆ -753.

ಆ) 330

ಇ) 100 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣ ಕಾರ್ಯ ಕೈಗೊಂಡಿದ್ದು ಕಟ್ಟಡ ಕೆಲಸವು ವಿವಿಧ ಹಂತಗಳಲ್ಲಿವೆ. ಸೂಕ್ತ ನಿವೇಶನ ದೊರಕಿಸಿಕೊಂಡು ಆರ್ಥಿಕ ಸ್ಥಿತಿಗತಿಗನುಗುಣವಾಗಿ ಉಳಿದ ಕಟ್ಟಡಗಳ ನಿರ್ಮಾಣವನ್ನು ಹಂತಹಂತವಾಗಿ ಕೈಗೊಳ್ಳಲಾಗುವುದು.

ಮೈಸೂರು ನಗರದ ಪೋಲೀಸ್ ಠಾಣೆಗಳ ಬಗ್ಗೆ

824- ಶ್ರೀ ಕೆ. ಹರ್ಷಕುಮಾರ ಗೌಡ (ಚಾಮರಾಜ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದಲ್ಲಿರುವ ಪ್ರಸಕ್ತ ಜನಸಂಖ್ಯೆ ಎಷ್ಟು?

ಆ) ಈ ಜನಸಂಖ್ಯೆ ಆಧಾರದ ಮೇಲೆ ಈಗ ಇರುವ ಪೋಲೀಸ್ ಸಿಬ್ಬಂದಿ ಎಷ್ಟು ಮತ್ತು ಠಾಣೆಗಳು ಎಷ್ಟು?

ಇ) ಬೆಂಗಳೂರು ನಗರದಲ್ಲಿರುವಂತೆ ಮೈಸೂರು ನಗರದಲ್ಲಿ ಜಸಂಖ್ಯೆಗೆ ಅನುಗುಣವಾಗಿ ಪೋಲೀಸ್ ಸಿಬ್ಬಂದಿ ಮತ್ತು ಪೋಲೀಸ್ ಠಾಣೆಗಳನ್ನು ಸಜ್ಜುಗೊಳಿಸಲಾಗಿದೆಯೇ?

ಶ್ರೀ ಧಮಸಿಂಗ್ (ಗೃಹ ಸಚಿವರು)

ಅ) 1981ರ ಜನಗಣತಿ ಪ್ರಕಾರ 4.6 ಲಕ್ಷಗಳು.

ಆ) 16 ಪೋಲೀಸ್ ಠಾಣೆಗಳಿವೆ. 864 ನಾಗರೀಕ ಪೋಲೀಸರು ಹಾಗೇ 310 ಸಶಸ್ತ್ರ ಪೋಲೀಸರು ಇದ್ದಾರೆ.

ಇ) ಹೌದು. ಜನಸಂಖ್ಯಾ ಆಧಾರದ ಮೇಲೆ ಪೋಲೀಸರ ಸಂಖ್ಯಾಬಲ ಬೆಂಗಳೂರು ಮತ್ತು ಮೈಸೂರು ನಗರಗಳಲ್ಲಿ ಹೆಚ್ಚು ಕಡಿಮೆ ಒಂದೇ ಆಗಿರುತ್ತದೆ.

ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಹಾಸ್ಟೆಲ್‌ಗಳ ಬಗ್ಗೆ

827- ಶ್ರೀ ಎಲ್.ಆರ್. ಶಿವರಾಮೇಗೌಡ (ನಾಗಮಂಗಲ) : ಮಾನ್ಯ ಕಾನೂನು ಮತ್ತು ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು?

2) ಆ ಪೈಕಿ ಸ್ವಂತ ಕಟ್ಟಡಗಳನ್ನು ಹೊಂದಿರುವವುಗಳ ಸಂಖ್ಯೆ ಎಷ್ಟು? ಹಾಗೂ ಬಾಡಿಗೆಗೆ ಕಟ್ಟಡಗಳಲ್ಲಿ ನಡೆಯುತ್ತಿರುವವುಗಳ ಸಂಖ್ಯೆ ಎಷ್ಟು?

3) ಹೊಸದಾಗಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಹಾಸ್ಟೆಲ್‌ಗಳನ್ನು ತೆರೆಯಲು ಅವಕಾಶವಿದೆಯೇ

4) ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಹಾಸ್ಟೆಲ್‌ಗಳನ್ನು ತೆರೆಯಲು ಸರ್ಕಾರ ಉದ್ದೇಶಿಸಿದೆಯೇ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಮತ್ತು ಕಾನೂನು ಸಚಿವರು)

1) ಪರಿಶಿಷ್ಟ ಜಾತಿ ಮೆಟ್ರಿಕ್‌ಪೂರ್ವ ವಿದ್ಯಾರ್ಥಿನಿಲಯಗಳು-636

2) ಪರಿಶಿಷ್ಟ ವರ್ಗಗಳ ಮೆಟ್ರಿಕ್‌ಪೂರ್ವ ವಿದ್ಯಾರ್ಥಿನಿಲಯಗಳು -19

3) ಪರಿಶಿಷ್ಟ ಜಾತಿ: ಪರಿಶಿಷ್ಟ ವರ್ಗಗಳ ಮೆಟ್ರಿಕ್‌ನಂತರದ ವಿದ್ಯಾರ್ಥಿನಿಲಯಗಳು-98

4) ಹಿಂದುಳಿದ ವರ್ಗಗಳ ಮೆಟ್ರಿಕ್‌ಪೂರ್ವ ವಿದ್ಯಾರ್ಥಿನಿಲಯಗಳು -68

5) ಹಿಂದುಳಿದ ವರ್ಗಗಳು ಮೆಟ್ರಿಕ್‌ನಂತರದ ವಿದ್ಯಾರ್ಥಿನಿಲಯಗಳು-68

ಒಟ್ಟು ವಿದ್ಯಾರ್ಥಿನಿಲಯಗಳ ಸಂಖ್ಯೆ -1,501.

ಆ)1) ಸ್ವಂತ ಕಟ್ಟಡಗಳಲ್ಲಿ ನಡೆಯುತ್ತಿರುವ ಪರಿಶಿಷ್ಟ ಜಾತಿ : ಪರಿಶಿಷ್ಟ ವರ್ಗಗಳ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು -330.

2) ಬಾಡಿಗೆಗೆ ಕಟ್ಟಡದಲ್ಲಿ ನಡೆಯುತ್ತಿರುವ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು-423.

3) ಸ್ವಂತ ಕಟ್ಟಡಗಳಲ್ಲಿ ನಡೆಯುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳು-204..

4) ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಗಳು -492.

5) ಇತರೆ ಸರ್ಕಾರಿ ಕಟ್ಟಡಗಳಲ್ಲಿ ನಡೆಯುತ್ತಿರುವ ಹಿಂದುಳಿದ ವಿದ್ಯಾರ್ಥಿನಿಲಯಗಳು -52.

ಒಟ್ಟು ವಿದ್ಯಾರ್ಥಿನಿಲಯಗಳ ಸಂಖ್ಯೆ -1,501

ಇ) ಇದೆ.

ಈ) ಪರಿಶೀಲಿಸಲಾಗುವುದು.

ಅತ್ಯಾಚಾರ ಪ್ರಕರಣಗಳ ಬಗ್ಗೆ

435- ಶ್ರೀ ಎಲ್.ಆರ್. ಶಿವರಾಮೆಗೌಡ : (ನಾಗಮಂಗಲ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿರುವ 1989-90 ಮತ್ತು 1990-91ನೇ ಸಾಲುಗಳಲ್ಲಿ ಎಷ್ಟು ಜನ ಅಪ್ರಪ್ತ ವಯಸ್ಸಿನ ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ನಡೆದಿದೆ?*

ಆ) *ಈ ಬಗ್ಗೆ ಎಷ್ಟು ಮೊಕದ್ದಮೆಗಳನ್ನು ನ್ಯಾಯಲಯದಲ್ಲಿ ದಾಖಲು ಮಾಡಲಾಗಿದೆ.*

ಇ) *ಈ ಪೈಕಿ ಎಷ್ಟು ಮಂದಿ ಅಪರಾಧಿಗಳಿಗೆ ಶಿಕ್ಷೆಯಾಗಿದೆ ಹಾಗೂ ಈ ರೀತಿ ನಡೆಯುತ್ತಿರುವ ದುಷ್ಕೃತ್ಯಗಳನ್ನು ತಡೆಗಟ್ಟಲು ಸರ್ಕಾರದವರು ಕೈಗೊಂಡಡಿರುವ ಕಾರ್ಯಕ್ರಮಗಳೇನು?*

ಶ್ರೀ ಧರ್ಮಸಿಂಗ್ (ಗೃಹಸಚಿವರು)

ಅ) 1989-90 -63

1990-91 -72

(1991ರ ಫೆಬ್ರವರಿ ಅಂತ್ಯದವರೆಗೆ)

ಆ) 1989-90 -49

1990-91 -31